# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | 1417 (1558) |
| ಸದಸ್ಯರ ಹೆಸರು | ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭಾ ಕ್ಷೇತ್ರ)) |
| ಉತ್ತರಿಸುವ ದಿನಾಂಕ | 19/12/2025 |
| ಉತ್ತರಿಸುವ ಸಚಿವರು | ಕೃಷಿ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಪ್ರಸ್ತುತ ಸಾವಯವ ಮತ್ತು ನೈಸರ್ಗಿಕ ಕೃಷಿಗೆ ಒಳಪಟ್ಟಿರುವ ಕೃಷಿ ಭೂಮಿಯ ಒಟ್ಟು ವಿಸ್ತೀರ್ಣವೆಷ್ಟು; | ರಾಜ್ಯದಲ್ಲಿ 77115 ಎಕರೆ ಪ್ರದೇಶದಲ್ಲಿ (2024-25 ನೇ ಸಾಲಿನ ಅಪೆಡಾ ಅಂಕಿಅಂಶದನ್ವಯ) ಸಾವಯವ ಕೃಷಿಯನ್ನು ಅಳವಡಿಸಲಾಗಿರುತ್ತದೆ. 2022-23 ನೇ ಸಾಲಿನ ಮುಖ್ಯಮಂತ್ರಿಗಳ ನೈಸರ್ಗಿಕ ಕೃಷಿ ಯೋಜನೆಯಡಿ 4834 ಎಕರೆ ಪ್ರದೇಶದಲ್ಲಿ ನೈಸರ್ಗಿಕ ಕೃಷಿಯನ್ನು ಅನುಷ್ಠಾನ ಮಾಡಲಾಗಿರುತ್ತದೆ. ಮುಂದುವರೆದು, ಕೇಂದ್ರ ಪುರಸ್ಕೃತ ರಾಷ್ಟ್ರೀಯ ನೈಸರ್ಗಿಕ ಕೃಷಿ ಅಭಿಯಾನ ಯೋಜನೆಯಡಿ ರಾಜ್ಯದ 990 ಗುಚ್ಛಗಳ 49500 ಹೆ. ಪ್ರದೇಶದಲ್ಲಿ 123750 ರೈತರನ್ನು ನೈಸರ್ಗಿಕ ಕೃಷಿಗೆ ಒಳಪಡಿಸುವ ಗುರಿಯೊಂದಿಗೆ ಕಾರ್ಯಕ್ರಮ ಅನುಷ್ಠಾನಗೊಳಿಸಲಾಗುತ್ತಿದೆ. |
| ಆ) | ರಾಜ್ಯದಲ್ಲಿ ಸಾವಯವ ಮತ್ತು ನೈಸರ್ಗಿಕ ಕೃಷಿ ಉತ್ತೇಜನಕ್ಕೆ ಸರ್ಕಾರ ರೂಪಿಸಿರುವ ಯೋಜನೆ ಮತ್ತು ಕಾರ್ಯಕ್ರಮಗಳೇನು; | 1. **ಜೋಯಿಡಾ ತಾಲ್ಲೂಕು- ರಾಜ್ಯದ ಪ್ರಥಮ ಸಾವಯವ ತಾಲ್ಲೂಕು:** ಜೋಯಿಡಾ ತಾಲ್ಲೂಕನ್ನು ಮುಂದಿನ ಮೂರು ವರ್ಷಗಳಲ್ಲಿ ಸಂಪೂರ್ಣ ಸಾವಯವ ತಾಲ್ಲೂಕನ್ನಾಗಿ ಪರಿವರ್ತಿಸಿ ರೈತರ ಸಾವಯವ ಉತ್ಪನ್ನಗಳಿಗೆ ಮಾರುಕಟ್ಟೆ ಒದಗಿಸಲು ಸಾವಯವ ಪ್ರಮಾಣೀಕರಣ ವ್ಯವಸ್ಥೆ ಕಲ್ಪಿಸುವ ಉದ್ದೇಶದೊಂದಿಗೆ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br>2. "**ಸಾವಯವ ಇಂಗಾಲ ಅಭಿಯಾನ**" ಯೋಜನೆಯಡಿ ಹಸಿರೆಲೆ ಗೊಬ್ಬರ ಬೀಜಗಳಾದ ಸನ್ ಹೆಂಪ್ ಮತ್ತು ಡಯಾಂಚ ಬೀಜಗಳನ್ನು ಎಲ್ಲಾ ವರ್ಗದ ರೈತರಿಗೆ ಶೇ.75ರ ರಿಯಾಯಿತಿ ದರದಲ್ಲಿ ಅಥವಾ ಪ್ರತಿ ಹೆಕ್ಟೇರಿಗೆ ಗರಿಷ್ಠ ರೂ.3000/- ರಂತೆ ಪ್ರತಿ ರೈತರಿಗೆ ಎರಡು ಹೆಕ್ಟೇರ್ ವಿಸ್ತೀರ್ಣಕ್ಕೆ ಸಹಾಯಧನ ಸೀಮಿತಗೊಳಿಸಿ ನೀಡಲಾಗುತ್ತಿದೆ.<br>3. **ದೇಸಿ ತಳಿಗಳ ಸಂರಕ್ಷಣೆ ಮತ್ತು ಉತ್ತೇಜನ ಕಾರ್ಯಕ್ರಮ:** ದೇಸಿ ತಳಿಗಳ ಸಂರಕ್ಷಣೆ ಮತ್ತು ಉತ್ತೇಜನ ಕಾರ್ಯಕ್ರಮದ ಮೂಲಕ ಸ್ಥಳೀಯ ದೇಸಿ ತಳಿಗಳ ಸಂರಕ್ಷಣೆ ಹಾಗೂ ಅಭಿವೃದ್ಧಿಗೆ ಉತ್ತೇಜನ ನೀಡಲಾಗುತ್ತಿದೆ.<br>4. **ಸಸ್ಯ ಸಂರಕ್ಷಣಾ ಕಾರ್ಯಕ್ರಮ**ದಡಿ ಜೈವಿಕ ಪೀಡೆನಾಶಕಗಳ ಬಳಕೆಯನ್ನು ಉತ್ತೇಜಿಸಲು ಹಾಗೂ ಸಾವಯವ ಕೃಷಿಯೆಡೆಗೆ ರೈತರನ್ನು ಕೊಂಡೊಯ್ಯುವ ಉದ್ದೇಶದಿಂದ ಶೇ. 50 ರ ಸಹಾಯಧನದಲ್ಲಿ ಜೈವಿಕ ಪೀಡೆನಾಶಕ ಹಾಗೂ ಜೈವಿಕ |

| | | |
|---|---|---|
| | | ನಿಯಂತ್ರಣಾಕಾರಕಗಳನ್ನು ರೈತರಿಗೆ ವಿತರಿಸಲಾಗುತ್ತಿದೆ.<br>5. **ಕೇಂದ್ರ ಪುರಸ್ಕೃತ - ಆಹಾರ ಮತ್ತು ಪೌಷ್ಠಿಕ ಭದ್ರತೆ ಮತ್ತು ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ:** ಯೋಜನೆಯಡಿ ಸಮಗ್ರ ಪೋಷಕಾಂಶ ನಿರ್ವಹಣೆ ಘಟಕಗಳಡಿ ಜೈವಿಕ ಗೊಬ್ಬರಗಳು ಮತ್ತು ಹಸಿರೆಲೆ ಬಿತ್ತನೆ ಬೀಜಗಳನ್ನು ಶೇ 50ರ ಸಹಾಯಧನದಡಿ ವಿತರಿಸಲಾಗುತ್ತಿದೆ.<br>6. **"ಸಾವಯವ ಮತ್ತು ಸಿರಿಧಾನ್ಯ ಹಬ್:** ರಾಜ್ಯದ ಸಾವಯವ ಹಾಗೂ ಸಿರಿಧಾನ್ಯ ಉತ್ಪಾದಕರಿಗೆ, ಮಾರಾಟಗಾರರಿಗೆ ಹಾಗೂ ಗ್ರಾಹಕರಿಗೆ ಅನುಕೂಲವಾಗುವಂತೆ ಸಾವಯವ ಹಾಗೂ ಸಿರಿಧಾನ್ಯ ಹಬ್ ಅನ್ನು ಸ್ಥಾಪಿಸಲಾಗುತ್ತಿದ್ದು, ಇದರಿಂದ ಸಾವಯವ ಹಾಗೂ ಸಿರಿಧಾನ್ಯ ಉತ್ಪನ್ನಗಳಿಗೆ ಗ್ರಾಹಕರಲ್ಲಿ ಅರಿವು ಮೂಡಿಸುವುದರ ಜೊತೆಗೆ ಉತ್ಪಾದಕರಿಗೆ ಉತ್ತಮ ಮಾರುಕಟ್ಟೆ ಕಲ್ಪಿಸಲು ಸಹಕಾರಿಯಾಗಲಿದೆ.<br>7. **ರಾಷ್ಟ್ರೀಯ ನೈಸರ್ಗಿಕ ಕೃಷಿ ಅಭಿಯಾನ:** ಕೇಂದ್ರ ಪುರಸ್ಕೃತ ರಾಷ್ಟ್ರೀಯ ನೈಸರ್ಗಿಕ ಕೃಷಿ ಅಭಿಯಾನ ಯೋಜನೆಯನ್ನು ರಾಜ್ಯದ 990 ಗುಚ್ಛಗಳ 49500 ಹೆ. ಪ್ರದೇಶದಲ್ಲಿ 123750 ರೈತರನ್ನು ನೈಸರ್ಗಿಕ ಕೃಷಿಗೆ ಒಳಪಡಿಸುವ ಗುರಿಯೊಂದಿಗೆ ಕಾರ್ಯಕ್ರಮ ಅನುಷ್ಠಾನಗೊಳಿಸಲಾಗುತ್ತಿದೆ.<br>8. **ರೈತಸಿರಿ ಮತ್ತು ಸಿರಿಧಾನ್ಯ ಉತ್ತೇಜನ ಕಾರ್ಯಕ್ರಮಗಳು:** ರಾಜ್ಯದ ಸಿರಿಧಾನ್ಯ ಕ್ಷೇತ್ರವನ್ನು ವಿಸ್ತರಿಸುವ ನಿಟ್ಟಿನಲ್ಲಿ ಪ್ರಮುಖ ಸಿರಿಧಾನ್ಯಗಳಾದ ಊದಲು, ನವಣೆ, ಹಾರಕ, ಕೊರಲೆ, ಸಾಮೆ ಮತ್ತು ಬರಗು ಬೆಳೆಗಳನ್ನು ಬೆಳೆಯುವ ರೈತರಿಗೆ ಬೆಳೆ ಸಮೀಕ್ಷೆ ಆಧಾರದ ಮೇರೆಗೆ ಪ್ರತಿ ಹೆಕ್ಟೇರ್ ಗೆ ರೂ. 10,000/- ಗಳಂತೆ ಗರಿಷ್ಠ 2 ಹೆಕ್ಟೇರ್ ಗಳಿಗೆ ಪ್ರೋತ್ಸಾಹಧನವನ್ನು ನೀಡಲಾಗುತ್ತಿದೆ. |
| ಇ) | ಸಾವಯವ ಮತ್ತು ನೈಸರ್ಗಿಕ ಕೃಷಿ ಕೈಗೊಳ್ಳುತ್ತಿರುವ ರೈತರಿಗೆ ಸರ್ಕಾರದಿಂದ ದೊರೆಯುತ್ತಿರುವ ನೆರವು, ಸಹಾಯಧನ ಮತ್ತು ಸೌಲಭ್ಯಗಳು ಯಾವುವು; | ಸಾವಯವ ಕೃಷಿ ನೈಸರ್ಗಿಕ ಕೃಷಿ ಕೈಗೊಳ್ಳುತ್ತಿರುವ ರೈತರಿಗೆ ಸರ್ಕಾರದಿಂದ ದೊರೆಯುತ್ತಿರುವ ನೆರವು ಸಹಾಯಧನ ಮತ್ತು ಸೌಲಭ್ಯಗಳು ಈ ಕೆಳಕಂಡಂತಿರುತ್ತವೆ.<br>1. **ಜೋಯಿಡಾ ತಾಲ್ಲೂಕು- ರಾಜ್ಯದ ಪ್ರಥಮ ಸಾವಯವ ತಾಲ್ಲೂಕು:** ಕಾರ್ಯಕ್ರಮದಡಿ ಸ್ಥಳೀಯ ಅವಶ್ಯಕತೆಗನುಗುಣವಾಗಿ ಸಾವಯವ ಕೃಷಿ ಪರಿಕರಗಳನ್ನು ಪ್ರತಿ ಹೆಕ್ಟೇರ್ ಗೆ ಗರಿಷ್ಠ ರೂ. 5,000/- ರಂತೆ ಶೇ. 75 ರ ಸಹಾಯಧನದಲ್ಲಿ ವಿತರಿಸಲಾಗುತ್ತಿದೆ.<br>2. "**ಸಾವಯವ ಇಂಗಾಲ ಅಭಿಯಾನ**" ಯೋಜನೆಯಡಿ ಹಸಿರೆಲೆ ಗೊಬ್ಬರ ಬೀಜಗಳಾದ ಸನ್‌ಹೆಂಪ್ ಮತ್ತು ಡಯಾಂಚ ಬೀಜಗಳನ್ನು ಎಲ್ಲಾ ವರ್ಗದ ರೈತರಿಗೆ ಶೇ.75ರ ರಿಯಾಯಿತಿ ದರದಲ್ಲಿ ಅಥವಾ ಪ್ರತಿ ಹೆಕ್ಟೇರಿಗೆ |

| | | |
|---|---|---|
| | | ಗರಿಷ್ಠ ರೂ.3000/- ರಂತೆ ಪ್ರತಿ ರೈತರಿಗೆ ಎರಡು ಹೆಕ್ಟೇರ್ ವಿಸ್ತೀರ್ಣಕ್ಕೆ ಸಹಾಯಧನ ಸೀಮಿತಗೊಳಿಸಿ ನೀಡಲಾಗುತ್ತಿದೆ.<br>3. **ಸಸ್ಯ ಸಂರಕ್ಷಣಾ ಕಾರ್ಯಕ್ರಮ**ದಡಿ ಜೈವಿಕ ಪೀಡೆನಾಶಕಗಳ ಬಳಕೆಯನ್ನು ಉತ್ತೇಜಿಸಲು ಹಾಗೂ ಸಾವಯವ ಕೃಷಿಯೆಡೆಗೆ ರೈತರನ್ನು ಕೊಂಡೊಯ್ಯುವ ಉದ್ದೇಶದಿಂದ ಶೇ. 50 ರ ಸಹಾಯಧನದಲ್ಲಿ ಜೈವಿಕ ಪೀಡೆನಾಶಕ ಹಾಗೂ ಜೈವಿಕ ನಿಯಂತ್ರಣಾಕಾರಕಗಳನ್ನು ರೈತರಿಗೆ ವಿತರಿಸಲಾಗುತ್ತಿದೆ.<br>4. **ಕೇಂದ್ರ ಪುರಸ್ಕೃತ - ಆಹಾರ ಮತ್ತು ಪೌಷ್ಠಿಕ ಭದ್ರತೆ ಮತ್ತು ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ:** ಯೋಜನೆಯಡಿ ಸಮಗ್ರ ಪೋಷಕಾಂಶ ನಿರ್ವಹಣೆ ಘಟಕಗಳಡಿ ಜೈವಿಕ ಗೊಬ್ಬರಗಳು ಮತ್ತು ಹಸಿರೆಲೆ ಬಿತ್ತನೆ ಬೀಜಗಳನ್ನು ಶೇ 50ರ ಸಹಾಯಧನದಡಿ ವಿತರಿಸಲಾಗುತ್ತಿದೆ.<br>5. **ರಾಷ್ಟ್ರೀಯ ನೈಸರ್ಗಿಕ ಕೃಷಿ ಅಭಿಯಾನ:** ಯೋಜನೆಯಡಿ ನೈಸರ್ಗಿಕ ಕೃಷಿ ಅನುಸರಿಸುತ್ತಿರುವ ಯೋಜನಾ ವ್ಯಾಪ್ತಿಯ ರೈತರಿಗೆ ರೂ.4000/ಹೆಕ್ಟೇರ್ ರಂತೆ ಪ್ರೋತ್ಸಾಹಧನ ಪಾವತಿಸಲಾಗುತ್ತದೆ.<br>6. **ರೈತಸಿರಿ ಮತ್ತು ಸಿರಿಧಾನ್ಯ ಉತ್ತೇಜನ ಕಾರ್ಯಕ್ರಮಗಳು:** ರಾಜ್ಯದ ಸಿರಿಧಾನ್ಯ ಕ್ಷೇತ್ರವನ್ನು ವಿಸ್ತರಿಸುವ ನಿಟ್ಟಿನಲ್ಲಿ ಪ್ರಮುಖ ಸಿರಿಧಾನ್ಯಗಳಾದ ಊದಲು, ನವಣೆ, ಹಾರಕ, ಕೊರಲೆ, ಸಾಮೆ ಮತ್ತು ಬರಗು ಬೆಳೆಗಳನ್ನು ಬೆಳೆಯುವ ರೈತರಿಗೆ ಬೆಳೆ ಸಮೀಕ್ಷೆ ಆಧಾರದ ಮೇರೆಗೆ ಪ್ರತಿ ಹೆಕ್ಟೇರ್ ಗೆ ರೂ. 10,000/- ಗಳಂತೆ ಗರಿಷ್ಠ 2 ಹೆಕ್ಟೇರ್ ಗಳಿಗೆ ಪ್ರೋತ್ಸಾಹಧನವನ್ನು ನೀಡಲಾಗುತ್ತಿದೆ. |
| ಈ) | ರೈತರು ಬೆಳೆಯುವ ಸಾವಯವ ಮತ್ತು ನೈಸರ್ಗಿಕ ಕೃಷಿ ಉತ್ಪನ್ನಗಳಿಗೆ ಸೂಕ್ತ ಮಾರುಕಟ್ಟೆ ಮತ್ತು ಒಳ್ಳೆಯ ಬೆಲೆ ದೊರೆಯುವಂತೆ ಮಾಡಲು ಸರ್ಕಾರ ಇದುವರೆವಿಗೆ ಕೈಗೊಂಡಿರುವ ಕ್ರಮಗಳೇನು; | ➢ ರಾಜ್ಯದ ಸಾವಯವ ಮತ್ತು ಸಿರಿಧಾನ್ಯ ಬೆಳೆಗಾರರು ಬೆಳೆದ ಉತ್ಪನ್ನಗಳ ಮಾರಾಟಕ್ಕೆ ಸೂಕ್ತ ಮಾರುಕಟ್ಟೆ ಹಾಗೂ ಉತ್ತಮ ಧಾರಣೆ ದೊರಕಿಸಿಕೊಡುವ ನಿಟ್ಟಿನಲ್ಲಿ ಸಾವಯವ ಕೃಷಿಕರ ಸಂಘಗಳನ್ನು ಒಗ್ಗೂಡಿಸಿ 15 ಪ್ರಾಂತೀಯ ಸಹಕಾರ ಸಾವಯವ ಕೃಷಿಕರ ಸಂಘಗಳ ಒಕ್ಕೂಟಗಳನ್ನು 2016-17 ನೇ ಸಾಲಿನಲ್ಲಿ ರಾಜ್ಯಾದ್ಯಂತ ರಚಿಸಲಾಗಿರುತ್ತದೆ.<br>➢ ರಾಜ್ಯದ ಸಾವಯವ ಮತ್ತು ಸಿರಿಧಾನ್ಯ ಉತ್ಪನ್ನಗಳಿಗೆ ಸೂಕ್ತ ಮಾರುಕಟ್ಟೆ ಸಂಪರ್ಕ ಒದಗಿಸಿಕೊಡುವ ನಿಟ್ಟಿನಲ್ಲಿ 2017 ರಲ್ಲಿ ರಾಷ್ಟ್ರ ಮಟ್ಟದ ಹಾಗೂ 2018, 2019, 2023, 2024 ಮತ್ತು 2025 ರಲ್ಲಿ ಅಂತರರಾಷ್ಟ್ರೀಯ ವಾಣಿಜ್ಯ ಮೇಳಗಳನ್ನು ಹಾಗೂ ಜಿಲ್ಲಾ ಮಟ್ಟದ ಸಾವಯವ ಮತ್ತು ಸಿರಿಧಾನ್ಯಗಳ ಮೇಳಗಳನ್ನು ಆಯೋಜಿಸಲಾಗಿರುತ್ತದೆ.<br>➢ ಜಿಲ್ಲಾ ಮಟ್ಟದ ಸಾವಯವ ಮತ್ತು ಸಿರಿಧಾನ್ಯಗಳ ಮೇಳಗಳನ್ನು ಜಿಲ್ಲೆಗಳಲ್ಲಿ ಆಯೋಜಿಸಲಾಗಿರುತ್ತದೆ. |

| | | |
|---|---|---|
| | | ➢ ಕೃಷಿ ವಿಶ್ವ ವಿದ್ಯಾನಿಲಯಗಳಲ್ಲಿ ಆಯೋಜಿಸಲಾಗುವ ಕೃಷಿ ಮೇಳಗಳಲ್ಲಿ ಸಾವಯವ ಮತ್ತು ನೈಸರ್ಗಿಕ ಪೆವಿಲಿಯನ್ ಗಳನ್ನು ಸ್ಥಾಪಿಸಲಾಗಿರುತ್ತದೆ.<br>➢ ರಾಜ್ಯದ ಸಾವಯವ ಹಾಗೂ ಸಿರಿಧಾನ್ಯ ಉತ್ಪಾದಕರಿಗೆ, ಮಾರಾಟಗಾರರಿಗೆ ಹಾಗೂ ಗ್ರಾಹಕರಿಗೆ ಅನುಕೂಲವಾಗುವಂತೆ ಸಾವಯವ ಹಾಗೂ ಸಿರಿಧಾನ್ಯ ಹಬ್ ಅನ್ನು ಸ್ಥಾಪಿಸಲಾಗುತ್ತಿದ್ದು, ಇದರಿಂದ ಸಾವಯವ ಹಾಗೂ ಸಿರಿಧಾನ್ಯ ಉತ್ಪನ್ನಗಳಿಗೆ ಗ್ರಾಹಕರಲ್ಲಿ ಅರಿವು ಮೂಡಿಸುವುದರ ಜೊತೆಗೆ ಉತ್ಪಾದಕರಿಗೆ ಉತ್ತಮ ಮಾರುಕಟ್ಟೆ ಕಲ್ಪಿಸಲು ಸಹಕಾರಿಯಾಗಲಿದೆ. |
| ಉ) | ರಾಸಾಯನಿಕಗಳ ಅತಿಯಾದ ಬಳಕೆಯಿಂದ ಕ್ಯಾನ್ಸರ್ ಕಾಯಿಲೆಯ ಹೆಚ್ಚಳವೂ ಸೇರಿದಂತೆ ಹಲವು ರೀತಿಯ ಗಂಭೀರ ಅಪಾಯಗಳನ್ನು ತಂದೊಡ್ಡಿದ್ದು, ರಾಸಾಯನಿಕ ಮತ್ತು ಕ್ರಿಮಿನಾಶಕಗಳ ಬಳಕೆಯಿಂದ ಕೃಷಿ ಭೂಮಿ ಆಹಾರವನ್ನೇ ವಿಷಯುಕ್ತಗೊಳಿಸಲಾಗುತ್ತಿದ್ದು, ಇದಕ್ಕೆಲ್ಲಾ ಏಕೈಕ ಪರಿಹಾರದಂತಿರುವ ಸಾವಯವ ಮತ್ತು ನೈಸರ್ಗಿಕ ಕೃಷಿಗೆ ಸೂಕ್ತ ಉತ್ತೇಜನ ನೀಡಲು ಸರ್ಕಾರ ಈ ಕೂಡಲೇ ಅಗತ್ಯ ಕ್ರಮ ವಹಿಸುವುದೇ; | ರಾಜ್ಯದಲ್ಲಿ ಸಾವಯವ ಮತ್ತು ನೈಸರ್ಗಿಕ ಕೃಷಿಗೆ ಈಗಾಗಲೇ ಉತ್ತೇಜನ ನೀಡಲಾಗುತ್ತಿದೆ. ಮುಂದುವರೆದು, ಪೀಡೆನಾಶಕಗಳ ಬಳಕೆ ಕುರಿತಂತೆ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br>➢ ಅವೈಜ್ಞಾನಿಕ ಹಾಗೂ ರಾಸಾಯನಿಕ ಪೀಡೆನಾಶಕಗಳ ಬಳಕೆಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸಲು ಸುರಕ್ಷಿತ ಕೀಟನಾಶಕಗಳ ಬಗ್ಗೆ ತರಬೇತಿಗಳನ್ನು ಹೋಬಳಿ ಮಟ್ಟದಲ್ಲಿ ಆಯೋಜಿಸಲಾಗುತ್ತಿದೆ.<br>➢ ರಾಜ್ಯದಲ್ಲಿ ಕೇಂದ್ರೀಯ ಕೀಟನಾಶಕ ಮಂಡಳಿ ಮತ್ತು ನೋಂದಣಿ ಸಮಿತಿ ಶಿಫಾರಸ್ಸು ಮಾಡಿರುವ ಪೀಡೆನಾಶಕಗಳನ್ನು ಮಾತ್ರ ಬಳಕೆ ಮಾಡಲು ಹಾಗೂ ಪೀಡೆ ನಿರ್ವಹಣೆಯಲ್ಲಿ ಜೈವಿಕ ಪೀಡೆನಾಶಕಗಳನ್ನು ಬಳಕೆ ಮಾಡಲು ಇಲಾಖೆಯ ತಾಂತ್ರಿಕ ಸಿಬ್ಬಂದಿ ಹಾಗೂ ಕೃಷಿ ವಿಶ್ವವಿದ್ಯಾಲಯಗಳ ವಿಜ್ಞಾನಿಗಳಿಂದ ರೈತರಿಗೆ ಮಾಹಿತಿಯನ್ನು ನಿಯಮಿತವಾಗಿ ಒದಗಿಸಲಾಗುತ್ತಿದೆ.<br>➢ ಬೆಳೆಗಳಲ್ಲಿ ಕಂಡುಬರುವ ಕೀಟ/ರೋಗ ಬಾಧೆ ಹಾಗೂ ಪೋಷಕಾಂಶಗಳ ಕೊರತೆಯನ್ನು ಗುರುತಿಸಿ, ಸೂಕ್ತ ವೈಜ್ಞಾನಿಕ ನಿರ್ವಹಣಾ ಕ್ರಮಗಳ ಮಾಹಿತಿಯನ್ನು ಸಕಾಲದಲ್ಲಿ ರೈತರಿಗೆ ಒದಗಿಸಲು ರಾಜ್ಯದಲ್ಲಿ 224 ಸಂಚಾರಿ ಸಸ್ಯ ಆರೋಗ್ಯ ಚಿಕಿತ್ಸಾಲಯಗಳನ್ನು ಸ್ಥಾಪಿಸಲಾಗಿರುತ್ತದೆ. ಸದರಿ ಚಿಕಿತ್ಸಾಲಯಗಳ ತಾಂತ್ರಿಕ ಸಿಬ್ಬಂದಿ ರೈತರ ತಾಕುಗಳಿಗೆ ಭೇಟಿ ನೀಡಿ ಅಗತ್ಯವಿರುವ ತಾಂತ್ರಿಕ ಸಲಹೆಗಳನ್ನು ರೈತರಿಗೆ ಸಕಾಲದಲ್ಲಿ ಒದಗಿಸುವ ಮೂಲಕ ಅನಗತ್ಯ ರಾಸಾಯನಿಕ ಪೀಡೆನಾಶಕಗಳ ಬಳಕೆಯನ್ನು ತಪ್ಪಿಸಲಾಗುತ್ತಿದೆ. |

ಸಂಖ್ಯೆ: AGRI/375/ACT/2025

(ಎನ್. ಚಲುವರಾಯಸ್ವಾಮಿ)
ಕೃಷಿ ಸಚಿವರು